## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಎಸ್ಎಲ್ಸಿ 90, ದಿನಾಂಕ:06/08/90 ರನ್ವಯ ಮಾಸಿಕ ವೇತನ ಸಿಬ್ಬಂದಿಯಾಗಿ (Monthly Rated Employee) ಕಾರ್ಯನಿರ್ವಹಿಸಿ ಸಕ್ರಮಗೊಂಡ ನೌಕರರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ನಿಯಮ 247-ಎ ಅಥವಾ 248-ಎ ರನ್ವಯ ಪಿಂಚಣಿ ಸೌಲಭ್ಯಗಳಿಗೆ ಅರ್ಹತಾದಾಯಕ ಸೇವೆಯೆಂದು ಪರಿಗಣಿಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 2 ಎಸ್ಎಲ್ಸಿ 90, ದಿನಾಂಕ:06/08/90.
2. ಸರ್ಕಾರದ ಆದೇಶ ಸಂಖ್ಯೆ: ಆಇ 9 ಎಸ್ಆರ್ಎ 2012, ದಿನಾಂಕ:08/09/2016.
3. ಸರ್ಕಾರದ ಆದೇಶ ಸಂಖ್ಯೆ: ಆಇ 04 ಎಸ್ಆರ್ಎ 2016, ದಿನಾಂಕ:10/04/2017.

ಪ್ರಸ್ತಾವನೆ:

ಮೇಲೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಸರ್ಕಾರದ ವಿವಿಧ ಇಲಾಖೆಗಳಲ್ಲಿ ದಿನಾಂಕ: 01/07/84ರ ಪೂರ್ವದಲ್ಲಿ ದಿನಗೂಲಿ ಆಧಾರದ ಮೇಲೆ ನೇಮಕಗೊಂಡು ದಿನಾಂಕ:01/01/90ರಂದು ಹತ್ತು ವರ್ಷಗಳ ಸೇವೆಯನ್ನು ಪೂರೈಸಿರುವ ದಿನಗೂಲಿ ನೌಕರರನ್ನು ಸಕ್ರಮಗೊಳಿಸಿ ಆದೇಶಿಸಲಾಗಿದೆ. ಸದರಿ ಆದೇಶದಲ್ಲಿ, ದಿನಾಂಕ:01/07/84ರ ಪೂರ್ವದಲ್ಲಿ ನೇಮಕಗೊಂಡ ದಿನಗೂಲಿ ನೌಕರರು ಸಕ್ರಮಗೊಳಿಸಲು ನಿಗಧಿಪಡಿಸಿದ ದಿನಾಂಕ:01/01/1990 ರಂದು ಹತ್ತು ವರ್ಷಗಳ ಸೇವೆಯನ್ನು ಪೂರೈಸದಿದ್ದಲ್ಲಿ, ಅವರನ್ನು ಮಾಸಿಕ ವೇತನ ಪದ್ಧತಿಯಡಿ ತಂದು ನಂತರ ಹತ್ತು ವರ್ಷಗಳ ಸೇವೆಯನ್ನು ಪೂರೈಸುವ ದಿನಾಂಕಕ್ಕೆ ಸಕ್ರಮಾತಿ ಪರಿಗಣಿಸಲಾಗಿದೆ. ಇಂತಹ ಪ್ರಕರಣಗಳಲ್ಲಿ ಮಾಸಿಕ ವೇತನ ಸಿಬ್ಬಂದಿಯಾಗಿ ಸಲ್ಲಿಸಿದ ಸೇವಾವಧಿಯನ್ನು ಯಾವುದೇ ಕಾರ್ಯಭೃತ ಸಿಬ್ಬಂದಿಯ ಪ್ರಕರಣದಲ್ಲಿ ಪರಿಗಣಿಸುವ ರೀತಿಯಲ್ಲಿಯೇ ಸದರಿ ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 248-ಎ ರ ತತ್ವದ ಮೇಲೆ ಹಾಗೂ ಅದರ ಮಟ್ಟಿಗೆ ಪಿಂಚಣಿ ಸೌಲಭ್ಯಗಳಿಗೆ ಅರ್ಹತಾದಾಯಕ ಸೇವೆಯೆಂದು ಪರಿಗಣಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.

ದಿನಗೂಲಿ ಆಧಾರದ ಮೇಲೆ ಕಾರ್ಯನಿರ್ವಹಿಸಿದ ಅವಧಿಯನ್ನು ಪಿಂಚಣಿ ಸೌಲಭ್ಯಗಳಿಗೆ ಪರಿಗಣಿಸಲು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳಲ್ಲಿ ಅವಕಾಶವಿರಲಿಲ್ಲ. ತದನಂತರ ಮಾನ್ಯ ನ್ಯಾಯಾಲಯಗಳ ಆದೇಶಗಳ ಹಿನ್ನೆಲೆಯಲ್ಲಿ, ಪ್ರಾರಂಭದಲ್ಲಿ ದಿನಗೂಲಿ ಅಥವಾ ಮಿತವೇತನ ಪದವೀಧರರಾಗಿ ಸೇವೆ ಸಲ್ಲಿಸಿ ತದನಂತರ ಸೇವೆಯಲ್ಲಿ ಕ್ರಮಬದ್ಧಗೊಳಿಸಲಾದ ಎಲ್ಲಾ ಸರ್ಕಾರಿ ನೌಕರರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 247ಎ ರಲ್ಲಿನ ನಿಬಂಧನೆಗಳಿಗೊಳಪಟ್ಟು ಅಧಿಕ ಅರ್ಹತಾದಾಯಕ ಸೇವಾ ಸೇರ್ಪಡೆ ಸೌಲಭ್ಯವನ್ನು ಮಂಜೂರು ಮಾಡಿ ಮೇಲೆ ಓದಲಾದ (2) ಮತ್ತು (3)ರ ಸರ್ಕಾರದ ಆದೇಶಗಳನ್ನು ಹೊರಡಿಸಲಾಗಿರುತ್ತದೆ.

ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ನಿಯಮ 248 ರನ್ವಯ ಸರ್ಕಾರದಿಂದ ಮಾನ್ಯತೆ ಪಡೆದ ಶಿಕ್ಷಣ ಸಂಸ್ಥೆಯ ನೌಕರನು, ಆ ಸಂಸ್ಥೆಯನ್ನು ಸರ್ಕಾರವು ವಹಿಸಿಕೊಂಡ ಕಾರಣ ಅಥವಾ ನೌಕರಿ ಭರ್ತಿ ನಿಯಮಗಳಿಗನುಸಾರವಾಗಿ ಸರ್ಕಾರಿ ನೌಕರಿಯನ್ನು ಪಡೆದಾಗ ಆ ಸಂಸ್ಥೆಯಲ್ಲಿ ಸಲ್ಲಿಸಿದ ಸೇವೆಯ ನಾಲ್ಕನೇ ಒಂದು ಭಾಗವನ್ನು ನಿವೃತ್ತಿ ವೇತನ ಅಥವಾ ಉಪದಾನದ ಸಂಬಂಧದಲ್ಲಿ ಅನುಮತಿಸಿದ ಅವಧಿಯು ಮೂರು ವರ್ಷಗಳಿಗೆ ಮೀರಿರತಕ್ಕದ್ದಲ್ಲ ಎಂಬ ಮಿತಿಗೊಳಪಟ್ಟು ಪರಿಗಣಿಸಲು ಅವಕಾಶವಿರುವುದಾಗಿದೆ. ಇಂತಹ ಸರ್ಕಾರಿ ನೌಕರರು ಸರ್ಕಾರಿ ಸೇವೆಗೆ 30 ವರ್ಷಗಳ ತರುವಾಯದಲ್ಲಿ ನೇರ ನೇಮಕಾತಿಗೊಂಡಲ್ಲಿ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ನಿಯಮ 247ಎ ಅಥವಾ 248 ಇವುಗಳಲ್ಲಿ ಯಾವುದು ಅವರಿಗೆ ಅನುಕೂಲಕರವಾಗಿದೆಯೋ ಅದರಂತೆ ಯಾವುದೇ ಒಂದು ನಿಯಮದಡಿಯಲ್ಲಿನ ಅರ್ಹತಾದಾಯಕ ಸೇವಾ ಸೌಲಭ್ಯವನ್ನು ಮಾತ್ರ ಪಿಂಚಣಿ ಸೌಲಭ್ಯಗಳಿಗೆ ಹೆಚ್ಚುವರಿ ಅರ್ಹತಾದಾಯಕ ಸೇವೆಯನ್ನಾಗಿ ಪರಿಗಣಿಸಲು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 247ಎ(5)ರಲ್ಲಿ ಅವಕಾಶ ಕಲ್ಪಿಸಲಾಗಿರುತ್ತದೆ.

ಆದ್ದರಿಂದ, ಪ್ರಾರಂಭದಲ್ಲಿ ದಿನಗೂಲಿಯಾಗಿ ಸೇವೆ ಸಲ್ಲಿಸಿ ಸಕ್ರಮಗೊಂಡ ನೌಕರರಿಗೆ ಮಾನ್ಯ ನ್ಯಾಯಾಲಯದ ಆದೇಶಗಳ ಹಿನ್ನೆಲೆಯಲ್ಲಿ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 247ಎ ರನ್ವಯ ಪಿಂಚಣಿ ಸೌಲಭ್ಯಗಳಿಗೆ ಅರ್ಹತಾದಾಯಕ ಸೇವೆಯೆಂದು ಪರಿಗಣಿಸಲು ದಿನಾಂಕ:08/09/2016 ಮತ್ತು ನಂತರದ ಆದೇಶಗಳಲ್ಲಿ ಅವಕಾಶ ಕಲ್ಪಿಸಿರುವುದರಿಂದ, ದಿನಗೂಲಿ ನೌಕರರಾಗಿದ್ದು, ಮಾಸಿಕ ವೇತನ ಸಿಬ್ಬಂದಿಯಾಗಿ ಪರಿವರ್ತಿತಗೊಂಡ ಸರ್ಕಾರಿ ನೌಕರರ ಪ್ರಕರಣಗಳಲ್ಲಿ ಸಹ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ

2..

ನಿಯಮ 248-ಎ ಅಥವಾ 247-ಎ ಇವುಗಳಲ್ಲಿ ಯಾವುದು ಅನುಕೂಲಕರವಾಗಿದೆಯೋ ಅದರನ್ವಯ ಯಾವುದೇ ಒಂದು ನಿಯಮದಡಿಯಲ್ಲಿನ ಹೆಚ್ಚುವರಿ ಅರ್ಹತಾದಾಯಕ ಸೇವಾ ಸೇರ್ಪಡೆ ಸೌಲಭ್ಯವನ್ನು ಮಾತ್ರ ಪಿಂಚಣಿ ಸೌಲಭ್ಯಗಳಿಗೆ ಪರಿಗಣಿಸಲು ಅವಕಾಶ ಕಲ್ಪಿಸುವುದು ಅಗತ್ಯವೆಂದು ಪರಿಗಣಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 02(ಇ) ಎಸ್‌ಆರ್‌ಎ 2020, ದಿನಾಂಕ:17/08/2020**

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಎಸ್‌ಎಲ್‌ಸಿ 90, ದಿನಾಂಕ:06/08/90 ರನ್ವಯ ಪ್ರಾರಂಭದಲ್ಲಿ ದಿನಗೂಲಿ ನೌಕರರಾಗಿ ಸೇವೆ ಸಲ್ಲಿಸಿ, ತದನಂತರ ಸೇವೆಯಲ್ಲಿ ಸಕ್ರಮಗೊಳಿಸಲು ನಿಗದಿಪಡಿಸಿದ ದಿನಾಂಕ:01/01/1990 ರಂದು 10 ವರ್ಷಗಳ ಸೇವೆಯನ್ನು ಪೂರೈಸದೆ ಮಾಸಿಕ ವೇತನ ಸಿಬ್ಬಂದಿಯಾಗಿ (Monthly Rated Employee) ಪರಿವರ್ತಿತಗೊಂಡು, ನಂತರ ಹತ್ತು ವರ್ಷಗಳ ಸೇವೆಯ ಪೂರೈಕೆಯ ನಂತರದಲ್ಲಿ ಸೇವೆಯಲ್ಲಿ ಸಕ್ರಮಗೊಂಡ ನೌಕರರ ಪ್ರಕರಣಗಳಲ್ಲಿ ಅಂತಹ ನೌಕರರು ಅವರುಗಳ ಇಚ್ಛೆಯಂತೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ನಿಯಮ 247-ಎ ಅಥವಾ 248-ಎ ರಡಿಯಲ್ಲಿನ ನಿಬಂಧನೆಗಳಿಗೊಳಪಟ್ಟು, ಯಾವುದೇ ಒಂದು ನಿಯಮದಡಿ ಅರ್ಹವಾಗುವ ಹೆಚ್ಚುವರಿ ಅರ್ಹತಾದಾಯಕ ಸೇವೆಗಳಲ್ಲಿ ಯಾವುದು ಅನುಕೂಲಕರವಾಗಿದೆಯೋ, ಅದರನ್ವಯದ ಹೆಚ್ಚುವರಿ ಅರ್ಹತಾದಾಯಕ ಸೇವೆಯನ್ನು ಮಾತ್ರ ಪರಿಗಣಿಸಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜಿ.ಟಿ. ಹೇಮಣ್ಣ)
ಸರ್ಕಾರದ ಉಪ ಕಾರ್ಯದರ್ಶಿ-2,
ಆರ್ಥಿಕ ಇಲಾಖೆ.

ಇವರಿಗೆ:

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ಎಲ್ಲಾ ಇಲಾಖಾ ಮುಖ್ಯಸ್ಥರು.
4. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
5. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
6. ಪ್ರಧಾನ ಮಹಾಲೇಖಪಾಲರು (ಸಿವಿಲ್ ಮತ್ತು ವಾಣಿಜ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
7. ಮಹಾಲೇಖಪಾಲರು (ಕಂದಾಯ ಸ್ವೀಕೃತಿ ಮತ್ತು ಕಾಮಗಾರಿಗಳು ಮತ್ತು ಅರಣ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
8. ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು.
9. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
10. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಂಗಳೂರು.
12. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ಬೆಂಗಳೂರು.
14. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
15. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
16. ಸಂಕಲನಕಾರರು, ಕನಾಟಕ ಗೆಜೆಟೆಡ್ ಮುಂದಿನ ಪ್ರಕರಣಗಳಲ್ಲಿ ಪ್ರಕಟಿಸುವುದಕ್ಕಾಗಿ.
17. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
18. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
19. ವಾರಪತ್ರ/ಶಾಖೆಯ ರಕ್ಷಾ ಕಡತ.
20. ಗಣಕ ಯಂತ್ರ ಶಾಖೆ.

ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆ ಅಧಿಕೃತ ಅಂತರ್ಜಾಲತಾಣ www.finance.karnataka.nic.in ವೀಕ್ಷಿಸಿ.
(ಕ್ರಮ ಸಂಖ್ಯೆ:6 ರಿಂದ 14 ರವರೆಗೆ ಪತ್ರದ ಮೂಲಕ)